**ದಿನಾಂಕಃ 04.09.2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

ಪಾಟೀ ಸವಾಲುಃ ಪ್ರತಿ**ವಾದಿ ಪರ** ಶ್ರೀ ಜೆ.ಬಿ.ಆರ್ **ವಕೀಲರಿಂದಃ**

ನಮ್ಮ ಕ್ರಯ ಪತ್ರದಲ್ಲಿ ಸರ್ವೆ ನಂಬರ್ ನ್ನು ತಪ್ಪಾಗಿ ನಮೂದು ಮಾಡಿರುವುದರಿಂದ ಸದರಿ ತಪ್ಪನ್ನು ಸರಿ ಪಡಿಸಿಕೊಡುವಂತೆ ಕೋರಿ ನಾವುಗಳು ಈ ದಾವೆ ಸಲ್ಲಿಸಿರುತ್ತೇವೆ. ನನ್ನ ತಂದೆಗೆ ಪಿತ್ರಾರ್ಜಿತವಾಗಿ ಬಂದಂತಹ ಆಸ್ತಿಗಳನ್ನು ನಾವು ವ್ಯವಸಾಯ ಮಾಡುತ್ತಿದ್ದೇವೆ. ದಾವಾ ಅನುಸೂಚಿ ಸ್ವತ್ತನ್ನು ಹೊರತು ಪಡಿಸಿ ನಮ್ಮ ತಂದೆಯು ಬೇರೆ ಆಸ್ತಿಯನ್ನು ಖರೀದಿ ಮಾಡಿರುವುದಿಲ್ಲ. ನಮ್ಮ ತಂದೆಯು ದಾವಾ ಆಸ್ತಿಯನ್ನು ಎಂದಿಗೂ ಖರೀದಿಸಿಲ್ಲ ಎಂದರೆ ಸರಿಯಲ್ಲ. ದಾವಾ ಅನುಸೂಚಿ ಸ್ವತ್ತನ್ನು ಕಬಳಿಸಬೇಕೆಂಬ ಉದ್ದೇಶದಿಂದ ದಿನಾಂಕ 12.07.1988 ರ ಕ್ರಯ ಪತ್ರವನ್ನು ಸೃಷ್ಟಿಸಿಕೊಂಡಿದ್ದೇವೆ ಎಂದರೆ ಸರಿಯಲ್ಲ. ಆದ್ದರಿಂದ ಈ ದಾವೆಯಲ್ಲಿ ಕೋರಿರುವಂತೆ ಪರಿಹಾರವನ್ನು ಪಡೆಯಲು ನಾನು ಅರ್ಹಳಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಯು ತಮ್ಮ ಜಮೀನಿನಲ್ಲಿ ಇಲ್ಲದ ಸಮಯದಲ್ಲಿ ನಾವುಗಳು ಭಾವ ಚಿತ್ರಗಳನ್ನು ತೆಗೆದು ಸಲ್ಲಿಸಿದ್ದೇವೆ ಎಂದರೆ ಸರಿಯಲ್ಲ. ಪ್ರತಿವಾದಿಯು ದಾವಾ ಅನುಸೂಚಿ ಸ್ವತ್ತಿನಲ್ಲಿ ಇಂದಿಗೂ ಸ್ವಾಧೀನತೆ ಹೊಂದಿ ವ್ಯವಸಾಯ ಮಾಡಿಕೊಂಡು ಬರುತ್ತಿದ್ದಾರೆ ಎಂದರೆ ಸರಿಯಲ್ಲ. ಪ್ರತಿವಾದಿಗೆ ತೊಂದರೆ ನೀಡುವ ಸಲುವಾಗಿ ಸುಳ್ಳು ದಾವೆ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಅನುಸೂಚಿ ಸ್ವತ್ತಿನಲ್ಲಿ ನಮೂದಿಸಿರುವ ಚೆಕ್ಕು ಬಂದಿಗಳು ಸರ್ವೆ ನಂಬರ್ 93/3 ಕ್ಕೆ ಸಂಬಂದಿಸಿದ್ದು ಎಂದರೆ ಸಾಕ್ಷಿದಾರರು ಸದರಿ ಚೆಕ್ಕುಬಂದಿಗಳು ಸರ್ವೆ ನಂಬರ್ 96/3 ಕ್ಕೆ ಸಂಬಂಧಿಸಿದ್ದು ಎಂದು ನುಡಿಯುತ್ತಾರೆ. ಸರ್ವೆ ನಂಬರ್ 93/3 ರ ಚೆಕ್ಕು ಬಂದಿಗೂ ಮತ್ತು ಸರ್ವೆ ನಂಬರ್ 96/3 ರ ಚೆಕ್ಕು ಬಂದಿಗೂ ವ್ಯತ್ಯಾಸ ಇದೆ ಎಂದರೆ ಸರಿಯಲ್ಲ. ಹಾಗಾಗಿ ಈ ದಾವೆಗೂ ಮತ್ತು ಪ್ರತಿವಾದಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಸರ್ವೆ ನಂಬರ್ 96/3 ರ ಕಂದಾಯ ದಾಖಲಾತಿಗಳು ಪ್ರತಿವಾದಿಯ ಹೆಸರಿನಲ್ಲಿ ದಾಖಲಾಗಿವೆ ಎಂದರೆ ಸರಿ.

ಮರುವಿಚಾರಣೆಃ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ
ನ್ಯಾಯಾಧೀಶರು, ತಿ.ನರಸಿಪುರ